ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	231(219)
ಮಾನ್ಯ ಸದಸ್ಯರ ಹೆಸರು		ಶ್ರೀ ಸುನೀಲ್ ಸುಬ್ರಮಣಿ ಎಂ ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	09/12/2020
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯ ಮಂತ್ರಿಗಳು, ಲೋಕೋಪಯೋಗಿ ಇಲಾಖೆ.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆ ಮಡಿಕೇರಿಯಲ್ಲಿಯಿರುವ ಜಿಲ್ಲಾಧಿಕಾರಿಗಳ ಕಛೇರಿ ಪಕ್ಕದಲ್ಲಿನ ಬರೆ/ಗುಡ್ಡವು ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಪರಿಹಾರ ಕ್ರಮಗಳೇನು (ವಿವರ ನೀಡುವುದು)	ಪ್ರಸಕ್ತ ಸಾಲಿನ ಮಳೆಯಿಂದಾಗಿ ಕೊಡಗು ಜಿಲ್ಲೆ ಮಡಿಕೇರಿಯಲ್ಲಿಯಿರುವ ಜಿಲ್ಲಾಧಿಕಾರಿಗಳ ಕಛೇರಿ ಪಕ್ಕದಲ್ಲಿ ಗುಡ್ಡದ ಬರೆಯು ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು. ತಾತ್ಕಾಲಿಕ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಪ್ರಸ್ತುತ, ಶಾಶ್ವತ ಕ್ರಮವಾಗಿ Retaining Wall ನಿರ್ಮಾಣ ಹಾಗೂ ಕೂಡು ರಸ್ತೆ ನಿರ್ಮಾಣ ಕಾಮಗಾರಿಯನ್ನು ರೂ. 700.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಟೆಂಡರ್ ಮುಖಾಂತರ ಕೈಗೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.
ಆ)	ಇಲ್ಲಿನ ಪ್ರದೇಶವನ್ನು ಸರಿಪಡಿಸಲು ಬಿಡುಗಡೆಯಾದ ಮತ್ತು ಖರ್ಚಾದ ಅನುದಾನ ಎಷ್ಟು; (ವಿವರ ಒದಗಿಸುವುದು)	ಸದರಿ ಕಾಮಗಾರಿಗೆ ಆದೇಶ ಸಂ:ಕಂಇ122 ಡಬ್ಲ್ಯೂಬಿಆರ್ 2015, ದಿ:21/05/2019 ರಲ್ಲಿ ಲೆಕ್ಕ ಶೀರ್ಷಿಕೆ 4059-80-051-0-42, 386 ಅಡಿಯಲ್ಲಿ ಅಂದಾಜು ಮೊತ್ತ ರೂ. 700.00 ಲಕ್ಷಗಳಿಗೆ ಕಂದಾಯ ಇಲಾಖೆಯು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಈವರೆಗೂ ಅನುದಾನ ಬಿಡುಗಡೆ ಯಾಗಿರುವುದಿಲ್ಲ.
ಇ)	ಮುಂದಿನ ದಿನಗಳಲ್ಲಿ ಗುಡ್ಡ ಕುಸಿತ ಪ್ರಕರಣಗಳನ್ನು ಸರ್ಕಾರ ಕೈಗೊಂಡ ಕ್ರಮಗಳಾವವು?(ವಿವರ ಒದಗಿಸುವುದು).	ಗುಡ್ಡ ಕುಸಿತ ಪ್ರಕರಣಗಳನ್ನು ತಪ್ಪಿಸಲು ಭೂ ಮತ್ತು ಗಣಿ ವಿಜ್ಞಾನ ಇಲಾಖೆಯ ವತಿಯಿಂದ ಪರಿಶೀಲಿಸ ಬಹುದಾಗಿರುತ್ತದೆ.

ಸಂಖ್ಯೆ: ಲೋಇ 38 ಬಿಎಲ್ ಕ್ಯೂ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯ ಮಂತ್ರಿಗಳು,
ಲೋಕೋಪಯೋಗಿ ಇಲಾಖೆ.